# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☎:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.:ವಿ.ನಿ.-09:2022-23:1158 ದಿನಾಂಕ:13.06.2022

## ಅಧಿಸೂಚನೆ

**ವಿಷಯ :** 2021-22 ನೇ ಸಾಲಿನ 2022 ರ ಜೂನ್/ಜುಲೈ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕೋತ್ತರ ಎಂ.ಸಿ.ಎ ಪದವಿಯ ಪ್ರಥಮ ಸೆಮಿಸ್ಟರ್‌ನ ಪರೀಕ್ಷೆಗಳಿಗೆ ಸಂಬಂಧಿಸಿದಂತೆ 2021-22 ನೇ ಶೈಕ್ಷಣಿಕ ಸಾಲಿಗೆ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

**ಉಲ್ಲೇಖ :** ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 10.06.2022

* * * * *

2021-22 ನೇ ಶೈಕ್ಷಣಿಕ ಸಾಲಿನ 2022 ರ ಜೂನ್/ಜುಲೈ ಮಾಹೆಗಳಲ್ಲಿ ನಡೆಯಲಿರುವ ಸ್ನಾತಕೋತ್ತರ ಪದವಿಗಳ ಪ್ರಥಮ ಸೆಮಿಸ್ಟರ್‌ನ ಎಂ.ಸಿ.ಎ ಪದವಿಗಳಿಗೆ UUCMS ತಂತ್ರಾಂಶದ ಮೂಲಕ (ಶೈಕಣಿಕ ವಿಭಾಗದಿಂದ ಪ್ರವೇಶಾನುಮೋದನೆ ಪಡೆದಿರುವಂತಹ) ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

ಪ್ರಸಕ್ತ ಸಾಲಿನ ಸ್ನಾತಕೋತ್ತರ ಪದವಿಗಳ ಪ್ರಥಮ ಸೆಮಿಸ್ಟರ್‌ಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಸಂಪೂರ್ಣ ದತ್ತಾಂಶವನ್ನು ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS) ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದ್ದು, ಸದರಿ ತಂತ್ರಾಂಶದಲ್ಲಿ ವಿಶ್ವವಿದ್ಯಾನಿಲಯದಿಂದ ಕಾಲೇಜು ಪ್ರಾಂಶುಪಾಲರು, ವಿಭಾಗದ ಮುಖ್ಯಸ್ಥರು/ ಅಧ್ಯಕ್ಷರು/ಸಂಯೋಜಕರು, ಅಧ್ಯಾಪಕರು, ವಿದ್ಯಾರ್ಥಿಗಳು ಇತ್ಯಾದಿ ಹಂತಗಳವರೆಗೆ ಸೂಕ್ತ ಜವಾಬ್ದಾರಿಗಳನ್ನು ಹಂಚಿಕೆ ಮಾಡಿ ಪ್ರತ್ಯೇಕ ಲಾಗಿನ್ ವಿವರಗಳನ್ನು ಒದಗಿಸಲಾಗಿರುತ್ತದೆ. ಇದೊಂದು ಹೊಸ ವ್ಯವಸ್ಥೆಯಾಗಿರುವುದರಿಂದ ಸಂಬಂಧಪಟ್ಟ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ಮತ್ತು ಸಹಾಯ ಒದಗಿಸಲು ತಿಳಿಸಲಾಗಿದೆ.

ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಸಂಯೋಜಕರು ಮತ್ತು ಕಾಲೇಜು ಪ್ರಾಂಶುಪಾಲರು UUCMS ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಪಾವತಿಸುವುದು. ವಿದ್ಯಾರ್ಥಿಗಳು ಭರ್ತಿ ಮಾಡಿದ ಅರ್ಜಿ ನಮೂನೆಗಳನ್ನು ಪರಿಶೀಲಿಸಿ UUCMS ತಂತ್ರಾಂಶದ ಮೂಲಕ ಅನುಮೋದಿಸುವುದು ಹಾಗೂ ವಿದ್ಯಾರ್ಥಿಗಳ ಪ್ರವೇಶಾನುಮೋದನೆ, ಪರೀಕ್ಷೆ ತೆಗೆದುಕೊಳ್ಳುವವರ ಅಂಕಿ-ಅಂಶಗಳನ್ನು ಬಾಹ್ಯವಾಗಿಯೂ ಕ್ರೋಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ 24.06.2022 ದಿನಾಂಕದೊಳಗೆ ಈ ಕೆಳಕಂಡ ನಮೂನೆಯಂತೆ ಭರ್ತಿ ಮಾಡಿ ಸಲ್ಲಿಸತಕ್ಕದ್ದು.

### ನಮೂನೆ

| ಕ್ರ.ಸಂ. | ವಿದ್ಯಾರ್ಥಿಯ ಹೆಸರು | ನೋಂದಣಿ ಸಂಖ್ಯೆ | ತೆಗೆದುಕೊಂಡಿರುವ ವಿಷಯ | ಶುಲ್ಕ ಪಾವತಿಸಿದ ವಿವರ & ದಿನಾಂಕ |
|---|---|---|---|---|
| 1. | | | | |
| 2. | | | | |

### ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ಪರೀಕ್ಷಾ ಶುಲ್ಕ ಪಾವತಿಸಲು ಪ್ರಾರಂಭ ದಿನಾಂಕ | 18.06.2022 |
| 2. | ವಿದ್ಯಾರ್ಥಿಗಳಿಗೆ **ದಂಡ ರಹಿತ** ಶುಲ್ಕ ಪಾವತಿಸಲು ಕೊನೆಯ ದಿನಾಂಕ | 22.06.2022 |
| 3. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 23.06.2022 |
| 4. | ಕಾಲೇಜಿನವರು ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ವಿವರಗಳನ್ನು UUCMS ಮೂಲಕ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 24.06.2022 |

ಪು.ತಿ.ನೋ.